**<u>ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ, ಮಾನ್ಯ ಶಾಸಕರು, ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರಿಸುವ ಕುರಿತು.</u>**

**ವಿಷಯ:** ರಾಜ್ಯದಲ್ಲಿ ಇತ್ತೀಚಿಗೆ ಸರ್ಕಾರಿ ವಸತಿ ನಿಲಯಗಳಲ್ಲಿ ಬಾಲಕಿಯರು ಗರ್ಭಿಣಿಯರಾಗುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿರುವ ಈ ವಿಷಯದ ಕುರಿತು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ.

*****

**ರಾಜ್ಯದಲ್ಲಿ ಬಾಲಗರ್ಭಿಣಿ ಪ್ರಕರಣಗಳು ಹೆಚ್ಚಾಗುತ್ತಿರುವ ಬಗ್ಗೆ ಪ್ರಮುಖ ಕಾರಣಗಳು ಈ ಕೆಳಕಂಡಂತಿವೆ:**

- ಅಪ್ರಾಪ್ತ ವಯಸ್ಸಿನ ಮಕ್ಕಳಿಂದ ಸಾಮಾಜಿಕ ಜಾಲತಾಣದ ಅತಿಯಾದ ಬಳಕೆ.
- ಹದಿಹರೆಯದ ಮಕ್ಕಳಲ್ಲಿ ಹೆಚ್ಚುತ್ತಿರುವ ಪ್ರೇಮ ಪ್ರಕರಣಗಳು.
- ತ್ವರಿತಗತಿಯಲ್ಲಿ ಬದಲಾಗುತ್ತಿರುವ ಕೌಟುಂಬಿಕ ವ್ಯವಸ್ಥೆ ಮತ್ತು ಕೌಟುಂಬಿಕ ಸಮಸ್ಯೆ.
- ಕೆಲವು ಸಮುದಾಯ ಮತ್ತು ಪಂಗಡಗಳಲ್ಲಿ ಆಚರಣೆಯಲ್ಲಿರುವ ಸಾಮಾಜಿಕ ಪದ್ಧತಿಗಳು.

**ಬಾಲಗರ್ಭಿಣಿ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು ವಿವರ.**

- ಬಾಲ್ಯವಿವಾಹದ ಪ್ರಯತ್ನ, ನಿಶ್ಚಿತಾರ್ಥದ ಬಗ್ಗೆ ಕ್ರಮ ಕೈಗೊಳ್ಳಲು ಬಾಲ್ಯ ವಿವಾಹ ನಿಷೇಧ ಕಾಯ್ದೆ-2006 ರಲ್ಲಿ ಯಾವುದೇ ಕಲಂಗಳಲ್ಲಿ ಅವಕಾಶ ಇಲ್ಲದೇ ದೂರನ್ನು ದಾಖಲಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಇದನ್ನು ಅಪರಾಧವನ್ನಾಗಿಸಲು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ -2025) ಅನ್ನು ಜಾರಿಗೆ ತರಲು ಕ್ರಮವಹಿಸಲಾಗುತ್ತಿದೆ.

- ರಾಜ್ಯದಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯರು ಬಾಲಗರ್ಭಿಣಿಯರು ಆಗುವುದನ್ನು ತಡೆಗಟ್ಟಲು ಎಲ್ಲಾ ಭಾಗೀದಾರ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಹಂತಗಳಲ್ಲಿ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಲು ಯೋಜಿಸಲಾಗುತ್ತಿದೆ.

- ದಿನಾಂಕ: 06.09.2024 ರ ಸರ್ಕಾರದ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಬಾಲಗರ್ಭಿಣಿಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.

- ರಾಜ್ಯದಲ್ಲಿ ಯಾವುದೇ ರೀತಿಯ ಸಂಕಷ್ಟದಲ್ಲಿರುವ ಮಕ್ಕಳಿಗೆ ನೆರವಾಗಲು ರಾಜ್ಯಾದ್ಯಂತ ಮಕ್ಕಳ ಸಹಾಯವಾಣಿ-1098 (24*7) ಕಾರ್ಯ ನಿರ್ವಹಿಸುತ್ತವೆ. ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿರುತ್ತಾರೆ.

- ಸಂಕಷ್ಟದಲ್ಲಿರುವ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದ್ದು ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೆ ಹಾಗೂ ಪುನರ್ವಸತಿ ಸೇವೆ ಒದಗಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರ ವಹಿಸುತ್ತಿದೆ.

- ಬಾಲ್ಯವಿವಾಹ, ಪೋಕ್ಸೋ, ಬಾಲಗರ್ಭಿಣಿ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯದ ಎಲ್ಲ ಜಿಲ್ಲಾ, ತಾಲ್ಲೂಕು, ಹೋಬಳಿ, ಗ್ರಾಮ ಪಂಚಾಯತಿ ಮತ್ತು ಗ್ರಾಮ ಮಟ್ಟದ ಸರ್ಕಾರಿ ಕಛೇರಿ, ಅರೆ ಸರ್ಕಾರಿ, ಖಾಸಗಿ ಸ್ವಯಂ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲ ಕಟ್ಟಡಗಳಲ್ಲಿ ಮಕ್ಕಳ ಸಹಾಯವಾಣಿ 1098 ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸಲು ಸರ್ಕಾರವು ದಿನಾಂಕ:25.09.2025 ರಲ್ಲಿ ಸುತ್ತೋಲೆಯನ್ನು ಹೊರಡಿಸಿರುತ್ತದೆ.

- ರಾಜ್ಯದ ಎಲ್ಲಾ ಶಾಲಾ ಕಾಲೇಜು ವಸತಿ ನಿಲಯ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು ಬಾಲಗರ್ಭಿಣಿ ಪೋಕ್ಸೋ ಬಾಲ್ಯ ವಿವಾಹ ಹಾಗೂ ಮಕ್ಕಳ ಸಹಾಯವಾಣಿ-1098 ಮಕ್ಕಳಿಗೆ ಅರಿವು ಜಾಗೃತಿ ಮೂಡಿಸುವ ಕುರಿತು ವಿವಿಧ ಇಲಾಖೆಗಳು ನಿಗಾ ವಹಿಸಬೇಕಾದ ಆದ್ಯತೆಯ ಅಂಶಗಳ ಕುರಿತು 07 ಇಲಾಖೆಗಳಿಂದ ದಿನಾಂಕ:13.10.2025 ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿದೆ.

- ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗಾಗಿ ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಕಾವಲು ಸಮಿತಿಯನ್ನು ರಚಿಸಲಾಗಿದೆ.

- ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ರಚಿಸಲಾಗಿದ್ದು, ಈ ಪ್ರಕರಣಗಳ ಕುರಿತು ಪ್ರತಿ ತ್ರೈಮಾಸಿಕದಲ್ಲಿ ಪರಿಶೀಲನೆ ಮಾಡಲಾಗುತ್ತಿದೆ.

- ಆಕಾಶವಾಣಿಯಲ್ಲಿ ಸರಣಿ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸಲಾಗಿದೆ.

- ರಾಜ್ಯಾದ್ಯಂತ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು, ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಲಕ್ಷಾಂತರ ಭಾಗೀದಾರರು, ಶಾಲಾ ಮಕ್ಕಳನ್ನೊಳಗೊಂಡಂತೆ ಸಾರ್ವಜನಿಕರು ಪ್ರಯೋಜನ ಪಡೆದಿರುತ್ತಾರೆ.

- ಪಾಲನೆ/ ಪೋಷಣೆ ಅವಶ್ಯಕತೆ ಇರುವ ಮಕ್ಕಳ ಸುರಕ್ಷತೆ ಮತ್ತು ಪುನರ್ವಸತಿಗಾಗಿ ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ.

- ಸಂತ್ರಸ್ಥ ಮಗುವಿಗೆ ಕಾನೂನು ಸಲಹೆ ಮತ್ತು ಆಪ್ತ ಸಮಾಲೋಚನೆಗಾಗಿ ಪ್ರತಿ ಜಿಲ್ಲೆಯಲ್ಲೂ ಬೆಂಬಲ ವ್ಯಕ್ತಿಗಳನ್ನು ಆಯ್ಕೆಮಾಡಿ ತರಬೇತಿ ನೀಡಲಾಗಿದೆ. (ಪ್ರಸ್ತುತ 173 ಬೆಂಬಲ ವ್ಯಕ್ತಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ).

- ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ (NCPCR) ವತಿಯಿಂದ ಕ್ರಮಬದ್ಧ ಕಾರ್ಯವಿಧಾನ(SOP) ರಚನೆಯಾಗಿದ್ದು, ಭಾಗೀದಾರ ಇಲಾಖೆಗಳಿಗೆ ಸದರಿ ಕಾರ್ಯವಿಧಾನದಂತೆ ಕಾರ್ಯನಿರ್ವಹಿಸಲು ಈಗಾಗಲೇ ತಿಳಿಸಲಾಗಿದೆ.

- ಮಕ್ಕಳ ಪಾಲನಾ ಕೇಂದ್ರಗಳಲ್ಲಿ ಸಂತ್ರಸ್ಥೆಗೆ 18 ವರ್ಷ ವಯಸ್ಸು ಪೂರ್ತಿಗೊಳ್ಳುವವರೆಗೆ ವಾಸ್ತವ್ಯಕ್ಕೆ ಅವಕಾಶ ಮಾಡಿಕೊಡಲಾಗುವುದು ಹಾಗೂ 23 ವರ್ಷದವರೆಗೂ ಅವಶ್ಯಕ ಬೆಂಬಲ ನೀಡಲಾಗುವುದು.

- ಸಂತ್ರಸ್ಥೆಗೆ ಆರೋಗ್ಯ ಸೇವೆ ಮತ್ತು ವೈದ್ಯಕೀಯ ತಪಾಸಣೆಗೆ ಒಂದು ಬಾರಿಗೆ ರೂ.6000/-ಹಾಗೂ ಶಿಕ್ಷಣ ಮುಂದುವರೆಸಲು ಇಚ್ಛಿಸಿದಲ್ಲಿ ಪ್ರಾಯೋಜಕತ್ವ ಯೋಜನೆಯಡಿ ಪ್ರತಿ ತಿಂಗಳಿಗೆ ರೂ.4,000/-ಗಳಂತೆ 18 ವರ್ಷ ಪೂರ್ಣಗೊಳ್ಳುವವರೆಗೂ ಆರ್ಥಿಕ ಸೌಲಭ್ಯ ಒದಗಿಸಲಾಗುವುದು.

- Pradhan Mantri Jan ArogyaYojana (PM-JAY) ಅಡಿಯಲ್ಲಿವರ್ಷಕ್ಕೆ ರೂ.5.00 ಲಕ್ಷಗಳ ಆರೋಗ್ಯ ವಿಮೆಯನ್ನು ಸಂತ್ರಸ್ಥೆಗೆ ಮತ್ತು ಅವಳ ನವಜಾತ ಶಿಶುವಿಗೆ ನೀಡಲಾಗುವುದು.

- ಬಾಲ್ಯವಿವಾಹ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯಾ ತಾಲ್ಲೂಕು ತಹಶೀಲ್ದಾರ್‌ರನ್ನು ಸಮನ್ವಯ ಹಾಗೂ ಪರಿಶೀಲನಾ ಸಮಿತಿ ಅಧ್ಯಕ್ಷರನ್ನಾಗಿ ಸರ್ಕಾರವು ನೇಮಿಸಿದೆ.

- ಬಾಲಗರ್ಭಿಣಿ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ FIR ದಾಖಲಿಸಿ ಕ್ರಮವಹಿಸಲಾಗುತ್ತಿದೆ.

- ಮಕ್ಕಳ ರಕ್ಷಣಾ ನೀತಿ -2023 ಕುರಿತು ಎಲ್ಲಾ ಶಾಲಾ ಕಾಲೇಜುಗಳಲ್ಲಿ ಅರಿವು ಮೂಡಿಸಲಾಗಿದೆ. ಮಕ್ಕಳ ರಕ್ಷಣಾ ಸಮಿತಿಗಳನ್ನು ಪ್ರತಿ ಶಾಲೆಗಳಲ್ಲಿಯೂ ರಚಿಸಲು ಕ್ರಮವಹಿಸಲಾಗಿದೆ.

- ಮಕ್ಕಳ ಪಾಲನಾ ಕೇಂದ್ರಗಳಲ್ಲಿ ದಾಖಲಾಗುವ ಬಾಲಗರ್ಭಿಣಿ/ಬಾಲತಾಯಿ ಮತ್ತು ನವಜಾತ ಶಿಶುವಿಗೆ ಸಂಬಂಧಿಸಿದಂತೆ ಪಾಲಿಸಬೇಕಾದ ಕ್ರಮಬದ್ಧ ಕಾರ್ಯವಿಧಾನ (SOP) ವನ್ನು ದಿ:- 02.09.2025 ರಂದು ಹೊರಡಿಸಲಾಗಿದೆ.

**ಸದರಿ ಪ್ರಕರಣಗಳನ್ನು ನಿಯಂತ್ರಿಸಲು ಈ ಕೆಳಕಂಡಂತೆ ಕಾಯ್ದೆ ಮತ್ತು ನಿಯಮಗಳನ್ನು ರೂಪಿಸಲಾಗಿದೆ.**

- ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015
- ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ತಿದ್ದುಪಡಿ ಕಾಯ್ದೆ 2021, 2016ರ ಮಾದರಿ ನಿಯಮಗಳು.
- ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ (ಪೋಕ್ಸೋ) ಕಾಯ್ದೆ-2012 ನಿಯಮಗಳು-2020.
- ಬಾಲ್ಯವಿವಾಹ ನಿಷೇಧ ಕಾಯ್ದೆ-2006,
- ಬಾಲ್ಯವಿವಾಹ ನಿಷೇಧ (ಕರ್ನಾಟಕ) ನಿಯಮಗಳು- 2014.
- ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ-2016
- ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ-1986
- ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ (ತಡೆಗಟ್ಟುವಿಕೆ) ಕಾಯ್ದೆ-1956

ಸರ್ಕಾರವು ಮೇಲ್ಕಂಡ ಎಲ್ಲಾ ಕಾಯ್ದೆ, ನಿಯಮಗಳು, ಸುತ್ತೋಲೆಗಳು ಹಾಗೂ ಆದೇಶಗಳ ಮೂಲಕ ಭಾಗೀದಾರ ಇಲಾಖೆಗಳ ಸಹಕಾರದೊಂದಿಗೆ ಅಪ್ರಾಪ್ತ ವಯಸ್ಸಿನ ಬಾಲಕಿಯರು ಬಾಲ ಗರ್ಭಿಣಿಯಾಗಲು ತಡೆಗಟ್ಟಲು ಕ್ರಮವಹಿಸುತ್ತಿದೆ.

**ಸಂಖ್ಯೆ:** ಮಮಇ 189 ಮಭಾಬ 2025

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು